# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು-572 103 ☎:0816 - 2255650,2273511 ಫ್ಯಾಕ್ಸ್:0816-2270719


**ಸಂಖ್ಯೆ:ತುವಿ:ಪವಿ:2025-26/೮೦೧** **ದಿನಾಂಕ:21.11.2025**

## <u>: ಸುತ್ತೋಲೆ :</u>

**ವಿಷಯ : 2018-19 (Double the Duration) ಹಾಗೂ 2020-21ನೇ ಸಾಲಿನಲ್ಲಿ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳಿಗೆ ಡಿಸೆಂಬರ್ 2025 ಹಾಗೂ ಜನವರಿ-2026 ರ ಮಾಹೆಯಲ್ಲಿ ಪೂರಕ ಪರೀಕ್ಷೆಗಳನ್ನು ನಡೆಸುತ್ತಿರುವ ಕುರಿತು.**

**ಉಲ್ಲೇಖ: 1. ಸುತ್ತೋಲೆ ಸಂಖ್ಯೆ:ತುವಿ:ಪವಿ:2025-26/796, ದಿನಾಂಕ:18.11.2025**
**2. ಸುತ್ತೋಲೆ ಸಂಖ್ಯೆ:ತುವಿ:ಪವಿ:2025-26/797, ದಿನಾಂಕ:18.11.2025**

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2018-19 (Double the Duration) ಹಾಗೂ 2020-21ನೇ ಸಾಲಿನಲ್ಲಿ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳಿಗೆ ಡಿಸೆಂಬರ್ 2025 ಹಾಗೂ ಜನವರಿ-2026 ರ ಮಾಹೆಯಲ್ಲಿ ಎಲ್ಲಾ ಪೂರಕ ಪರೀಕ್ಷೆಗಳನ್ನು ನಡೆಸಲು ಉದ್ದೇಶಿಸಲಾಗಿದ್ದು, ಈ ಸಂಬಂಧ ಸಂಬಂಧಪಟ್ಟ ಅರ್ಹ ವಿದ್ಯಾರ್ಥಿಗಳಿಂದ ಪೂರಕ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳಲು ಉಲ್ಲೇಖ(1) & (2) ರಲ್ಲಿ ಸುತ್ತೋಲೆ ಹೊರಡಿಸಲಾಗಿದೆ.

ಈ ಸಂಬಂಧ ಸಿ.ಬಿ.ಸಿ.ಎಸ್. ಅಡಿಯಲ್ಲಿನ 2018-19(Double the duration) ಹಾಗೂ 2020-21 ನೇ ಸಾಲಿನ ಸ್ನಾತಕ ಪೂರಕ ವಿದ್ಯಾರ್ಥಿಗಳಿಗೆ **<u>2025-26 ನೇ ಸಾಲಿನಲ್ಲಿ ಏಕಕಾಲದಲ್ಲಿ ಮೊದಲ ಸೆಮಿಸ್ಟರ್‌ನಿಂದ ಆರನೇ ಸೆಮಿಸ್ಟರ್‌ವರೆಗಿನ ಎಲ್ಲಾ ಪೂರಕ ಪರೀಕ್ಷೆಗಳನ್ನು ಡಿಸೆಂಬರ್ 2025 ರಿಂದ ಫೆಬ್ರವರಿ 2026ರ ವರೆಗೆ ನಡೆಸಲಾಗುತ್ತಿದೆ.</u> ಹೀಗಾಗಿ ಎಲ್ಲಾ ಸೆಮಿಸ್ಟರ್‌ಗಳ ಪೂರಕ ಪರೀಕ್ಷೆಗಳಿಗೂ ವಿದ್ಯಾರ್ಥಿಗಳು ಒಂದೇ ಬಾರಿ ಶುಲ್ಕ ಪಾವತಿ ಮಾಡಿ ಅದರಂತೆ ಪರೀಕ್ಷೆಗಳನ್ನು ತೆಗೆದುಕೊಳ್ಳತಕ್ಕದ್ದು.**

ಮುಂದುವರೆದು, **2025-26 ನೇ ಶೈಕ್ಷಣಿಕ ಸಾಲಿನಲ್ಲಿ ಮೇಲ್ಕಂಡ ಅವಧಿಯ ವಿದ್ಯಾರ್ಥಿಗಳಿಗೆ ಇದೊಂದೇ ಬಾರಿಗೆ ಮಾತ್ರ ಈ ಪರೀಕ್ಷೆಗಳನ್ನು ನಡೆಸಲಾಗುತ್ತಿದ್ದು, ಯಾವುದೇ ಕಾರಣಕ್ಕೂ ಮತ್ತೊಂದು ಬಾರಿ ಪರೀಕ್ಷೆಗಳನ್ನು ನಡೆಸಲಾಗುವುದಿಲ್ಲ** ಎಂಬ ಅಂಶವನ್ನು ಸಂಬಂಧಪಟ್ಟ ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ಹಾಗೂ ಮಾಹಿತಿಯನ್ನು ಕಾಲೇಜಿನ ಸೂಚನಾ ಫಲಕದಲ್ಲಿ ಹಾಕುವಂತೆ ಈ ಮೂಲಕ ತಿಳಿಸಲಾಗಿದೆ.

ಉಪಕುಲಸಚಿವರು (ಪರೀಕ್ಷಾಂಗ)

ಉಪಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಪ್ರಾಂಶುಪಾಲರು, ಘಟಕ / ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು,
ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು.

2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಉಪಕುಲಸಚಿವರು, ಶೈಕ್ಷಣಿಕ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ವಿಶ್ವವಿದ್ಯಾನಿಲಯದ ಅಂತರ್ಜಾಲ (Website) ದಲ್ಲಿ ಇಂದೇ ಪ್ರಕಟಿಸುವುದು ಹಾಗೂ ಎಲ್ಲಾ ಸ್ನಾತಕ ಪದವಿ ಕಾಲೇಜುಗಳಿಗೆ ಇಮೇಲ್ ಕಳುಹಿಸುವುದು.**
8. ಫಲಿತಾಂಶ ಗಣಕೀಕರಣ ವಿಭಾಗ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಕಛೇರಿ ಪ್ರತಿ.